# All India Radio: Bangalore
# National Bulletin In Kannada
# 14.04.2026  07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**14.04.2026  07.35 a.m.**

**<><><><>**

ಮುಖ್ಯಾಂಶಗಳು

1. ಉತ್ತರಾಖಂಡದಲ್ಲಿಂದು ದೆಹಲಿ-ಡೆಹರಾಡೂನ್ ಆರ್ಥಿಕ ಕಾರಿಡಾರ್ ಉದ್ಘಾಟಿಸಲಿರುವ ಪ್ರಧಾನಿ ನರೇಂದ್ರ ಮೋದಿ
2. ಇಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ೧೩೫ನೇ ಜಯಂತಿ ; ಬಾಬಾ ಸಾಹೇಬರ ಆದರ್ಶಗಳನ್ನು ಅಳವಡಿಸಿಕೊಳ್ಳುವಂತೆ ರಾಷ್ಟ್ರಪತಿ ಕರೆ
3. ಇರಾನ್ ಬಂದರುಗಳ ಮೇಲೆ ಅಮೆರಿಕ ನೌಕಾ ದಿಗ್ಬಂಧನ ಜಾರಿ ; ಎಲ್ಲ ಹಡಗುಗಳ ಕಠಿಣ ತಪಾಸಣೆ, ಮಿಲಿಟರಿ ಕಣ್ಗಾವಲು
4. ಮಹಿಳಾ ಅಥ್ಲೇಟಿಕ್‌ಗಳಿಗೆ ಎಸ್‌ಆರ್‌ವೈ-ಜೀನ್ ಪರೀಕ್ಷೆ ಕಡ್ಡಾಯಗೊಳಿಸಲು ಭಾರತೀಯ ಅಥ್ಲೇಟಿಕ್ಸ್ ಒಕ್ಕೂಟ ನಿರ್ಧಾರ
5. ಐಪಿಎಲ್ ಟಿ-೨೦ ಕ್ರಿಕೆಟ್ ; ರಾಜಸ್ಥಾನ್ ರಾಯಲ್ಸ್ ವಿರುದ್ಧ ಸನ್ ರೈಸರ್ಸ್ ಹೈದರಾಬಾದ್ ತಂಡಕ್ಕೆ ೫೭ ರನ್‌ಗಳ ಜಯ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ಇಂದು 'ದೆಹಲಿ-ಡೆಹ್ರಾಡೂನ್ ಆರ್ಥಿಕ ಕಾರಿಡಾರ್' ಅನ್ನು ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ಕಾರಿಡಾರ್‌ನ ಎಲಿವೇಟೆಡ್ ವಿಭಾಗದಲ್ಲಿ ನಿರ್ಮಿಸಲಾಗಿರುವ ವನ್ಯಜೀವಿ ಕಾರಿಡಾರ್ ಅನ್ನು ಪರಿಶೀಲಿಸಲಿದ್ದಾರೆ. ನಂತರ, ಡೆಹ್ರಾಡೂನ್ ಸಮೀಪವಿರುವ ಜೈ ಮಾ ದಾತ್ ಕಾಳಿ ದೇವಾಲಯಕ್ಕೆ ಭೇಟಿ ನೀಡಿ ದೇವಿದರ್ಶನ ಪಡೆದು, ಪೂಜೆ ಸಲ್ಲಿಸಲಿದ್ದಾರೆ. ಸುಮಾರು ೧೨ ಸಾವಿರ ಕೋಟಿ ರೂಪಾಯಿಗೂ ಅಧಿಕ ವೆಚ್ಚದಲ್ಲಿ ನಿರ್ಮಿಸಲಾಗಿರುವ ಈ ೨೧೩ ಕಿಲೋಮೀಟರ್ ಉದ್ದದ ಷಟ್‌ಪಥ ಕಾರಿಡಾರ್, ದೆಹಲಿ ಮತ್ತು ಡೆಹ್ರಾಡೂನ್ ನಡುವಿನ ಪ್ರಯಾಣದ ಸಮಯವನ್ನು ಪ್ರಸ್ತುತ ಇರುವ ೬ ಗಂಟೆಗಳಿಂದ ಕೇವಲ ಎರಡೂವರೆ ಗಂಟೆಗಳಿಗೆ ಇಳಿಸಲಿದೆ. ಈ

ಯೋಜನೆಯು ೧೦ ಇಂಟರ್‌ಚೇಂಜ್‌ಗಳು, ಮೂರು ರೈಲ್ವೆ ಮೇಲ್ಸೇತುವೆಗಳು, ನಾಲ್ಕು ಪ್ರಮುಖ ಸೇತುವೆಗಳು ಮತ್ತು ೧೨ ವೇಸೈಡ್ ಸೌಲಭ್ಯಗಳನ್ನು ಒಳಗೊಂಡಿದ್ದು, ಸುಗಮ ಮತ್ತು ವೇಗದ ಸಂಪರ್ಕವನ್ನು ಕಲ್ಪಿಸಲಿದೆ.

<><><><>

ಭಾರತದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ೧೩೬ನೇ ಜಯಂತಿಯ ಅಂಗವಾಗಿ ಇಂದು ದೇಶಾದ್ಯಂತ ಅವರಿಗೆ ಗೌರವ ನಮನ ಸಲ್ಲಿಸಲಾಗುತ್ತಿದೆ. ಈ ಸಂದರ್ಭವನ್ನು ಸ್ಮರಿಸಲು ದೇಶದಾದ್ಯಂತ ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ರಾಷ್ಟ್ರ ರಾಜಧಾನಿ ನವದೆಹಲಿಯ ಸಂಸತ್ ಭವನದ ಸಂಕೀರ್ಣದಲ್ಲಿ ಇಂದು ಬೆಳಿಗ್ಗೆ ವಿಶೇಷ ಕಾರ್ಯಕ್ರಮ ನಡೆಯಲಿದ್ದು, ಗಣ್ಯರು ಬಾಬಾಸಾಹೇಬರಿಗೆ ಗೌರವ ನಮನ ಸಲ್ಲಿಸಲಿದ್ದಾರೆ. ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ದೇಶದ ಸಮಸ್ತ ನಾಗರಿಕರಿಗೆ ಶುಭಾಶಯ ಕೋರಿದ್ದಾರೆ. ಡಾ. ಅಂಬೇಡ್ಕರ್ ಅವರು ಶ್ರೇಷ್ಠ ನ್ಯಾಯಶಾಸ್ತ್ರಜ್ಞ, ಅರ್ಥಶಾಸ್ತ್ರಜ್ಞ, ಪ್ರಖರ ಚಿಂತಕ ಮತ್ತು ಸಮಸಮಾಜದ ಪ್ರಬಲ ಪ್ರತಿಪಾದಕರಾಗಿದ್ದರು ಎಂದು ರಾಷ್ಟ್ರಪತಿಗಳು ಸ್ಮರಿಸಿದ್ದಾರೆ. ಸಮಾಜದ ವಂಚಿತ ಮತ್ತು ದುರ್ಬಲ ವರ್ಗಗಳ ಏಳಿಗೆಗಾಗಿ ಅವರು ತಮ್ಮ ಜೀವನವನ್ನೇ ಮುಡಿಪಾಗಿಟ್ಟಿದ್ದರು ಎಂದು ಹೇಳಿರುವ ರಾಷ್ಟ್ರಪತಿಯವರು, ಬಾಬಾಸಾಹೇಬರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ನ್ಯಾಯಸಮ್ಮತ, ಅಂತರ್ಗತ ಮತ್ತು ಪ್ರಗತಿಪರ ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡುವಂತೆ ನಾಗರಿಕರಿಗೆ ಕರೆ ನೀಡಿದ್ದಾರೆ.

<><><><>

ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ನಿಗದಿಪಡಿಸುವುದಕ್ಕೆ ಸಂಬಂಧಿಸಿದ ಅರ್ಜಿಯ ಕುರಿತು ಸುಪ್ರೀಂ ಕೋರ್ಟ್ ಕೇಂದ್ರ ಮತ್ತು ಇತರ ಅಧಿಕಾರಿಗಳಿಂದ ಪ್ರತಿಕ್ರಿಯೆ ಕೋರಿದೆ. ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ನೇತೃತ್ವದ ಪೀಠವು ಕೇಂದ್ರ ಸರ್ಕಾರ, ವಿದೇಶಿ ವ್ಯಾಪಾರ ನಿರ್ದೇಶನಾಲಯ ಮತ್ತು ಕೃಷಿ ವೆಚ್ಚ ಮತ್ತು ಬೆಲೆಗಳ ಆಯೋಗಕ್ಕೆ ನೋಟಿಸ್ ಜಾರಿ ಮಾಡಿದೆ. ಎಂಎಸ್‌ಪಿ ಅನ್ನು ನಿರ್ಧರಿಸುವಾಗ ರಾಜ್ಯ-ನಿರ್ದಿಷ್ಟ ಕೃಷಿ ವೆಚ್ಚಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕೆಂದು ಅರ್ಜಿಯಲ್ಲಿ ಒತ್ತಾಯಿಸಲಾಗಿದೆ. ಎಂಎಸ್‌ಪಿ ಅನ್ನು ನಿಗದಿಪಡಿಸುವುದು ರಾಜ್ಯಗಳಾದ್ಯಂತ ಭೂಮಿ ಮತ್ತು ಬಂಡವಾಳ ವೆಚ್ಚಗಳಲ್ಲಿನ

ವ್ಯತ್ಯಾಸಗಳು ಸೇರಿದಂತೆ ಸಂಕೀರ್ಣ ಆರ್ಥಿಕ ಪರಿಗಣನೆಗಳನ್ನು ಒಳಗೊಂಡಿರುತ್ತದೆ. ಆದ್ದರಿಂದ ಏಕರೂಪದ ನೀತಿ ಕಾರ್ಯಸಾಧ್ಯವಲ್ಲದಿರಬಹುದು ಎಂದು ನ್ಯಾಯಾಲಯ ಮನಗಂಡಿದ್ದು, ಅರ್ಜಿಯು ಆರ್ಥಿಕ ನೀತಿಯ ಪುನರ್ನಿರ್ಮಾಣವನ್ನು ಬಯಸುತ್ತದೆ ಎಂದು ಹೇಳಲಾಗಿದೆ.

<><><><>

ದೇಶದ ನವೋದ್ಯಮ ಪರಿಸರ ವ್ಯವಸ್ಥೆಯಲ್ಲಿ ಬಂಡವಾಳ ಹರಿವನ್ನು ಹೆಚ್ಚಿಸಲು ಸರ್ಕಾರವು ಹತ್ತು ಸಾವಿರ ಕೋಟಿ ರೂಪಾಯಿಗಳ ನಿಧಿಯೊಂದಿಗೆ ನವೋದ್ಯಮ ಭಾರತ ನಿಧಿ ೨.೦ ಅನ್ನು ಅಧಿಕೃತವಾಗಿ ಅಧಿಸೂಚಿಸಿದೆ. ಈ ಯೋಜನೆಯಡಿಯಲ್ಲಿ ಹೂಡಿಕೆಗಳು, ತಂತ್ರಜ್ಞಾನ ನವೋದ್ಯಮಗಳು ಮತ್ತು ಆರಂಭಿಕ ಬೆಳವಣಿಗೆಯ ಹಂತ ಸೇರಿದಂತೆ ಆದ್ಯತೆಯ ವಿಭಾಗಗಳನ್ನು ಬೆಂಬಲಿಸುವ ಪರ್ಯಾಯ ಹೂಡಿಕೆ ನಿಧಿಗಳ ಮೇಲೆ ಕೇಂದ್ರೀಕರಿಸುತ್ತವೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ತಿಳಿಸಿದೆ. ಉದ್ಯಮ ಮತ್ತು ಆಂತರಿಕ ವ್ಯಾಪಾರದ ಉತ್ತೇಜನ ಇಲಾಖೆಯಿಂದ ಕಾರ್ಯಾಚರಣೆಯ ಮಾರ್ಗಸೂಚಿಗಳು ಮತ್ತು ಸಾಹಸೋದ್ಯಮ ಬಂಡವಾಳ ಹೂಡಿಕೆ ಸಮಿತಿಯ ಸಂಯೋಜನೆಯನ್ನು ಹೊರಡಿಸಲಾಗುವುದು. ಅಧಿಸೂಚನೆಯ ದಿನಾಂಕದಿಂದ ಜಾರಿಗೆ ಬರುವಂತೆ ಭಾರತೀಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ಬ್ಯಾಂಕ್ ಅನುಷ್ಠಾನ ಸಂಸ್ಥೆಯಾಗಿ ಯೋಜನೆಯ ಕಾರ್ಯಾಚರಣೆಯನ್ನು ಪ್ರಾರಂಭಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ. ಈ ಯೋಜನೆಯು ದೇಶದ ನಾವೀನ್ಯತೆ-ನೇತೃತ್ವದ ಬೆಳವಣಿಗೆಯ ಕಾರ್ಯಸೂಚಿಯನ್ನು ಮುನ್ನಡೆಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ ಮತ್ತು ಅದರ ಆರ್ಥಿಕ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸಲು, ಉತ್ಪಾದನಾ ಸಾಮರ್ಥ್ಯಗಳನ್ನು ಹೆಚ್ಚಿಸಲು, ಉತ್ತಮ ಗುಣಮಟ್ಟದ ಉದ್ಯೋಗಗಳನ್ನು ಸೃಷ್ಟಿಸಲು ಮತ್ತು ಭಾರತವನ್ನು ಜಾಗತಿಕ ನಾವೀನ್ಯತೆ ಕೇಂದ್ರವಾಗಿ ಇರಿಸಲು ಕೊಡುಗೆ ನೀಡುವ ನಿರೀಕ್ಷೆಯಿದೆ.

<><><><>

ಪಾಕಿಸ್ತಾನದಲ್ಲಿ ನಡೆದ ಶಾಂತಿ ಮಾತುಕತೆಗಳು ವಿಫಲವಾದ ಬೆನ್ನಲ್ಲೇ, ಅಮೆರಿಕ ನೌಕಾಪಡೆಯು ಇರಾನ್‌ನ ಬಂದರುಗಳ ಮೇಲೆ ಸಂಪೂರ್ಣ ನೌಕಾ ದಿಗ್ಬಂಧನವನ್ನು ಜಾರಿಗೆ ತಂದಿದೆ. ಇದು ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆಯನ್ನು ಮತ್ತಷ್ಟು ಹೆಚ್ಚಿಸಿದೆ. ನಿನ್ನೆ ಸಂಜೆ ೭:೩೦ ರಿಂದ ಈ ದಿಗ್ಬಂಧನ ಜಾರಿಗೆ ಬಂದಿದ್ದು, ಪರ್ಷಿಯನ್ ಗಲ್ಫ್ ಮತ್ತು ಓಮನ್ ಗಲ್ಫ್‌ನ ಇರಾನ್ ಕರಾವಳಿ ಪ್ರದೇಶಗಳಿಗೆ ಪ್ರವೇಶಿಸುವ ಅಥವಾ ನಿರ್ಗಮಿಸುವ ಹಡಗುಗಳ ಮೇಲೆ ನಿರ್ಬಂಧ ಅನ್ವಯಿಸಲಿದೆ

ಎಂದು ಅಮೆರಿಕದ ಕೇಂದ್ರೀಯ ಕಮಾಂಡ್ ತಿಳಿಸಿದೆ. ಇರಾನ್ ಹೊರತುಪಡಿಸಿ ಇತರ ತಾಣಗಳಿಗೆ ತೆರಳುವ ಹಡಗುಗಳು ಹಾರ್ಮುಜ್ ಜಲಸಂಧಿಯ ಮೂಲಕ ಸಂಚರಿಸಬಹುದಾದರೂ, ಕಠಿಣ ತಪಾಸಣೆ ಮತ್ತು ಮಿಲಿಟರಿ ಕಣ್ಗಾವಲನ್ನು ಎದುರಿಸಬೇಕಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

<><><><>

ಕಠಿಣ ಸಮಯದಲ್ಲಿ ಇರಾನ್‌ಗೆ ವಿಶ್ವಾಸಾರ್ಹ ಮತ್ತು ಸಹಾನುಭೂತಿಯ ಪಾಲುದಾರನಾಗಿ ಬೆಂಬಲ ನೀಡಿದ ಭಾರತ ಸರ್ಕಾರ ಮತ್ತು ಜನತೆಗೆ ಭಾರತದಲ್ಲಿನ ಇರಾನ್ ರಾಯಭಾರಿ ಡಾ. ಮೊಹಮ್ಮದ್ ಫತಲಿ ಕೃತಜ್ಞತೆ ಸಲ್ಲಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಕಷ್ಟದ ಸಮಯದಲ್ಲಿ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಿಕೊಟ್ಟಿದ್ದಕ್ಕಾಗಿ ಭಾರತಕ್ಕೆ ಧನ್ಯವಾದ ತಿಳಿಸಿದರು. ಭಾರತ ಮತ್ತು ಇರಾನ್ ಸಾಮಾನ್ಯ ಹಿತಾಸಕ್ತಿಗಳನ್ನು ಹೊಂದಿದ್ದು, ಮುಂದಿನ ದಿನಗಳಲ್ಲಿ ಉಭಯ ದೇಶಗಳ ನಡುವಿನ ಉತ್ತಮ ಬಾಂಧವ್ಯ ಮುಂದುವರಿಯಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

<><><><>

ಪ್ಯಾರಿಸ್‌ನಲ್ಲಿ ನಿನ್ನೆ ಭಾರತದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹಾಗೂ ಫ್ರಾನ್ಸ್‌ನ ಯುರೋಪ್ ಮತ್ತು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಪ್ರಧಾನ ಕಾರ್ಯದರ್ಶಿ ಮಾರ್ಟಿನ್ ಬ್ರಿಯಾನ್ಸ್ ಅವರ ಸಹ-ಅಧ್ಯಕ್ಷತೆಯಲ್ಲಿ ಭಾರತ-ಫ್ರಾನ್ಸ್ ವಿದೇಶಾಂಗ ಕಚೇರಿ ಸಮಾಲೋಚನಾ ಸಭೆ ನಡೆಯಿತು. ಸಭೆಯ ವೇಳೆ ದ್ವಿಪಕ್ಷೀಯ ಪಾಲುದಾರಿಕೆಯನ್ನು ವಿಶೇಷ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಗೆ ಮೇಲ್ದರ್ಜೆಗೇರಿಸುವ ಹಿನ್ನೆಲೆಯಲ್ಲಿ ಸಾಧಿಸಲಾಗಿರುವ ಪ್ರಗತಿಯನ್ನು ಹಾಗೂ ದ್ವಿಪಕ್ಷೀಯ ವ್ಯಾಪಾರದ ವಿವಿಧ ಆಯಾಮಗಳಲ್ಲಿ ಬಲಗೊಳ್ಳುತ್ತಿರುವ ಪಾಲುದಾರಿಕೆ ಕುರಿತು ಸಮಗ್ರ ಪರಿಶೀಲನೆ ನಡೆಸಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಭಾರತ-ಫ್ರಾನ್ಸ್ ನಾವೀನ್ಯತೆ ವರ್ಷ, ಆರ್ಥಿಕ ಭದ್ರತೆಯ ಮೇಲಿನ ಸಹಕಾರ ಮತ್ತು ದ್ವಿಪಕ್ಷೀಯ ವ್ಯಾಪಾರವನ್ನು ದ್ವಿಗುಣಗೊಳಿಸುವ ಗುರಿ ಸೇರಿದಂತೆ ಪ್ರಮುಖ ವಿಚಾರಗಳನ್ನು ಎರಡೂ ಕಡೆಯವರು ಪರಿಶೀಲಿಸಿದ್ದಾರೆ. ಪ್ಯಾರಿಸ್ ಭೇಟಿಯ ಸಮಯದಲ್ಲಿ, ವಿದೇಶಾಂಗ ಕಾರ್ಯದರ್ಶಿಗಳು, ಫ್ರಾನ್ಸ್‌ನ ಯುರೋಪ್ ಮತ್ತು ವಿದೇಶಾಂಗ ವ್ಯವಹಾರಗಳ

ಸಚಿವ ಜೀನ್-ನೋಯೆಲ್ ಬ್ಯಾರಟ್ ಮತ್ತು ಫ್ರಾನ್ಸ್ ಅಧ್ಯಕ್ಷರ ರಾಜತಾಂತ್ರಿಕ ಸಲಹೆಗಾರ ಎಮ್ಯಾನುಯೆಲ್ ಬಾನ್ ಅವರನ್ನು ಭೇಟಿ ಮಾಡಿದರು.

<><><>

ದೇಶದ ಚಿಲ್ಲರೆ ಹಣದುಬ್ಬರ ಪ್ರಮಾಣ ಕಳೆದ ಮಾರ್ಚ್ ತಿಂಗಳಲ್ಲಿ ಶೇಕಡ ೩.೪ಕ್ಕೆ ಏರಿಕೆಯಾಗಿದೆ. ಈ ವರ್ಷದ ಫೆಬ್ರವರಿ ತಿಂಗಳಲ್ಲಿ ಈ ಪ್ರಮಾಣ ಶೇಕಡ ೩.೨೧ ರಷ್ಟಿತ್ತು. ಕೇಂದ್ರ ಅಂಕಿ-ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ ಬಿಡುಗಡೆ ಮಾಡಿರುವ ವರದಿ ಪ್ರಕಾರ ಗ್ರಾಮೀಣ ಭಾಗದಲ್ಲಿ ಹಣದುಬ್ಬರ ಶೇಕಡ ೩.೬೩ಕ್ಕೆ ಏರಿಕೆಯಾಗಿದ್ದರೆ, ನಗರ ಪ್ರದೇಶಗಳಲ್ಲಿ ಶೇಕಡ ೩.೧೧ ರಷ್ಟು ದಾಖಲಾಗಿದೆ. ಪಶ್ಚಿಮ ಏಷ್ಯಾದಲ್ಲಿನ ಬೆಳವಣಿಗೆಗಳಿಂದಾಗಿ ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ಏರಿಳಿತಗಳು ಕಂಡು ಬಂದರೂ ಭಾರತದ ದೇಶೀಯ ಹಣದುಬ್ಬರ ಸ್ಥಿರವಾಗಿದ್ದು, ಭಾರತೀಯ ರಿಸರ್ವ್ ಬ್ಯಾಂಕ್ ನಿಗದಿಪಡಿಸಿರುವ ಮಿತಿಯೊಳಗೆ ಇರುವುದು ಸಮಾಧಾನಕರ ಸಂಗತಿಯಾಗಿದೆ. ಬೆಲೆ ಏರಿಕೆ ಪಟ್ಟಿಯಲ್ಲಿ ಚಿನ್ನ ಮತ್ತು ಬೆಳ್ಳಿ ಆಭರಣಗಳು, ತೆಂಗಿನಕಾಯಿ, ಟಮೊಟೊ ಹಾಗೂ ಹೂಕೋಸು ಇದ್ದರೆ, ಇದಕ್ಕೆ ವ್ಯತಿರಿಕ್ತವಾಗಿ ಈರುಳ್ಳಿ, ಆಲೂಕಡ್ಡೆ, ಬೆಳ್ಳುಳ್ಳಿ, ತೊಗರಿಬೇಳೆ ಮತ್ತು ಕಡಲೆ ಕಾಳು ಬೆಲೆಗಳ ಏರಿಕೆಯಲ್ಲಿ ಕಂಡು ಬಂದಿದೆ.

<><><>

ಭಾರತೀಯ ಅಥ್ಲೆಟಿಕ್ಸ್ ಒಕ್ಕೂಟ ಎಎಫ್‌ಐ ಈ ವರ್ಷದಿಂದ ಮಹಿಳಾ ಕ್ರೀಡಾಪಟುಗಳಿಗೆ ಎಸ್‌ಆರ್‌ವೈ-ಜೀನ್ ಪರೀಕ್ಷೆಯನ್ನು ಕಡ್ಡಾಯಗೊಳಿಸಲು ನಿರ್ಧರಿಸಿದೆ. ದಕ್ಷಿಣ ಏಷ್ಯಾ ಅಥ್ಲೆಟಿಕ್ಸ್ ಒಕ್ಕೂಟದ ಅಧ್ಯಕ್ಷ ಡಾ.ಲಲಿತ್ ಕೆ. ಬಾನೋಟ್ ನಿನ್ನೆ ಸಂಜೆ ಕೊಹಿಮಾದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ್ದಾರೆ. ಇದೇ ಮೊದಲ ಬಾರಿಗೆ ಭಾರತೀಯ ಅಥ್ಲೆಟಿಕ್ಸ್ ಒಕ್ಕೂಟದ ವಾರ್ಷಿಕ ಮಹಾಸಭೆ ನಾಗಾಲ್ಯಾಂಡ್‌ನಲ್ಲಿ ಆಯೋಜನೆಗೊಂಡಿದ್ದು, ಇಂದಿನಿಂದ ಎರಡು ದಿನಗಳ ಕಾಲ ಕೊಹಿಮಾದಲ್ಲಿ ನಡೆಯಲಿದೆ. ಮುಖ್ಯಮಂತ್ರಿ ನೆಫಿಯು ರಿಯೊ ಈ ಸಭೆಯನ್ನು ಉದ್ಘಾಟಿಸಲಿದ್ದಾರೆ. ತಲಮಟ್ಟದಲ್ಲಿ ಕ್ರೀಡೆಯನ್ನು ಬಲಪಡಿಸಲು ಮತ್ತು ಸ್ಥಳೀಯ ಅಥ್ಲೆಟಿಕ್ಸ್ ಸಂಸ್ಥೆಗಳನ್ನು ಉತ್ತೇಜಿಸಲು ದೇಶದ ವಿವಿಧ ಭಾಗಗಳಲ್ಲಿ ಇಂತಹ ಸಭೆಗಳನ್ನು ನಡೆಸಲಾಗುತ್ತಿದೆ.

<><><>

ಹೈದರಾಬಾದ್‌ನ ರಾಜೀವ್‌ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ವಿರುದ್ಧ ಸನ್ ರೈಸರ್ಸ್ ಹೈದರಾಬಾದ್ ತಂಡ ೫೭ ರನ್‌ಗಳ ಗೆಲುವು ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಹೈದರಾಬಾದ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೧೬ ರನ್ ಗಳಿಸಿತು. ಪ್ರತಿಯಾಗಿ ರಾಜಸ್ಥಾನ ತಂಡ ೧೯ ಓವರ್‌ಗಳಲ್ಲಿ ತನ್ನೆಲ್ಲ ವಿಕೆಟ್ ಕಳೆದುಕೊಂಡು ೧೫೯ ರನ್ ಗಳಿಸಲಷ್ಟೆ ಶಕ್ತವಾಯಿತು. ಮೊದಲ ಇನ್ನಿಂಗ್ಸ್‌ನಲ್ಲಿ ಹೈದರಾಬಾದ್ ಪರ ಇಶಾನ್ ಕಿಶನ್ ೯೧ ಹಾಗೂ ಹೆನ್ರಿಚ್ ಕ್ಲಾಸೆನ್ ೪೦ ರನ್ ಗಳಿಸಿ ರಾಜಸ್ಥಾನಕ್ಕೆ ಬೃಹತ್ ಗುರಿ ನೀಡುವಲ್ಲಿ ಪ್ರಮುಖ ಪಾತ್ರ ವಹಿಸಿದರು. ತಮ್ಮ ಉತ್ತಮ ಬೌಲಿಂಗ್ ಪ್ರದರ್ಶನಕ್ಕಾಗಿ ಪ್ರಫುಲ್ ಹಿಂಗೆ ಅವರಿಗೆ ಪಂದ್ಯ ಶ್ರೇಷ್ಠ ಪ್ರಶಸ್ತಿ ನೀಡಲಾಯಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>